# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ ರವರ ಪತ್ರ ಸಂಖ್ಯೆ: ಡಿಇವಿ.06/43/2016-17 ದಿನಾಂಕ:06-12-2016
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 31-01-2017 ರ ಕಾರಣ ಕೇಳುವ ನೋಟೀಸ್.
3. ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರು ಕಾರಣ ಕೇಳುವ ನೋಟೀಸ್‌ಗೆ ಸಲ್ಲಿಸಿರುವ ಸಮಜಾಯಿಷಿ ದಿನಾಂಕ: 04-03-2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ: 06-12-2016 ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ ರವರ ಪತ್ರದಲ್ಲಿ ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರು ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯ ಅಡಿಯಲ್ಲಿ 54704/--(ಐವತ್ನಾಲ್ಕು ಸಾವಿರದ ಏಳು ನೂರಾ ನಾಲ್ಕು) ರೂಗಳನ್ನು ಇಎಫ್‌ಎಂಎಸ್ ಮೂಲಕ ಪಡೆದುಕೊಂಡಿದ್ದು, ಆ ಬಗ್ಗೆ ಯಾವುದೇ ಗುತ್ತಿಗೆ ಕರಾರನ್ನು ಪಿ.ಡಿ.ಓ, ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರೊಂದಿಗೆ ಮಾಡಿಕೊಂಡಿರುವುದಿಲ್ಲವೆಂದು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ದಿನಾಂಕ:31-01-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ರವರು ದಿನಾಂಕ: 04-03-2017 ರಂದು ಎರಡನೇ ಕಾರಣ ಕೇಳುವ ನೋಟೀಸ್‌ಗೆ ಸಮಜಾಯಿಷಿ ಸಲ್ಲಿಸಿದ್ದು, ಅದರಲ್ಲಿ ಈ ಕೆಳಕಂಡ ಪ್ರಮುಖ ಅಂಶಗಳನ್ನು ತಿಳಿಸಿರುತ್ತಾರೆ.

ಕರ್ನಾಟಕ ಪಂ.ರಾಜ್ ಅಧಿನಿಯಮದ ಪ್ರಕಾರಣ 43-ಎ ರಡಿಯಲ್ಲಿ ಹೇಳಿರುವ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘನೆ ಮಾಡಿ ನನ್ನ ವಿರುದ್ಧ ನನ್ನ ವಿರುದ್ಧ ನೋಟಿಸ್ ನೀಡಿರುವುದಾಗಿ ಮತ್ತು ನಾನು ಕರ್ನಾಟಕ ಪಂ.ರಾಜ್ ಅಧಿನಿಯಮದ ಪ್ರಕಾರಣ 12 ರಲ್ಲಿ ಹೇಳಿರುವ ಯಾವುದೇ ನಿಯಮಗಳನ್ನು ಉಲ್ಲಂಘನೆ ಮಾಡಿರುವುದಿಲ್ಲ ನಾನು ಗಂಧನಹಳ್ಳಿ ಗ್ರಾಮ ಪಂಚಾಯಿತಿಯೊಂದಿಗೆ ಯಾವುದೇ ಒಪ್ಪಂದವನ್ನು ಮಾಡಿಕೊಂಡು ಯಾವುದೇ ಕಾಮಗಾರಿಯನ್ನು ಮಾಡದೆ . ಇರುವುದರಿಂದ ನನ್ನ ಮೇಲೆ ಕ್ರಮ ಕೈಗೊಳ್ಳುವುದು ಪಂ.ರಾಜ್ ನಿಯಮಗಳಿಗೆ ವಿರುದ್ಧವಾಗಿರುತ್ತದೆ. ನಾನು ಪಂ.ರಾಜ್ ಅಧಿನಿಯಮ 1993 ರಲ್ಲಿರುವ ನಿಯಮಗಳ ಅನುಸಾರ ಕರ್ತವ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ.

ಪ್ರಕರಣದಲ್ಲಿ ಸಂಬಂಧಪಟ್ಟ ದಾಖಲಾತಿಗಳನ್ನು ಪರಿಶೀಲಿಸಲಾಗಿ ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರು ನಿಯಮಬಾಹಿರವಾಗಿ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯ ಅಡಿಯಲ್ಲಿ ಹಣ ಪಡೆದಿರುವುದು ಸಾಬೀತಾಗಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ಗಂಧನ ಹಳ್ಳಿ ಗ್ರಾಮ ಪಂಚಾಯಿತಿಯ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/496/ಗ್ರಾಪಂಅ/2016 ಬೆಂಗಳೂರು, ದಿನಾಂಕ: 22-08-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರು ನಿಯಮಬಾಹಿರವಾಗಿ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯ ಅಡಿಯಲ್ಲಿ ಹಣ ಪಡೆದಿರುವುದು ಸಾಬೀತಾಗಿರುವುದರಿಂದ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಗಂಧನ ಹಳ್ಳಿ ಗ್ರಾಮ ಪಂಚಾಯತಿಯ ಸದಸ್ಯತ್ವದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ. ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ.
3) ಶ್ರೀ ಎಸ್.ರಾಮು, ಸದಸ್ಯರು ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗಂಧನ ಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.